# 10ನೇ ತರಗತಿ ವೀರಲವ ಪದ್ಯ ಕನ್ನಡ ನೋಟ್ಸ್ KannadaPdf.com

ತರಗತಿ : **10**ನೇ ತರಗತಿ

ಪದ್ಯದ ಹೆಸರು : ವೀರಲವ

ಕೃತಿಕಾರರ ಹೆಸರು : ಲಕ್ಷ್ಮೀಶ

## ಕವಿ ಪರಿಚಯ:

ಲಕ್ಷ್ಮೀಶ




ಕವಿ ಲಕ್ಷ್ಮೀಶನು ಕ್ರಿ . ಶ . ಸುಮಾರು ೧೫೦ ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ದೇವನೂರಿನಲ್ಲಿ ಜನಿಸಿದನು . ಇವನಿಗೆ ಲಕ್ಷ್ಮೀರಮಣ , ಲಕ್ಷ್ಮೀಪತಿ ಎಂಬ ಹೆಸರುಗಳೂ ಇದ್ದವು . ಇವರು ' ಜೈಮಿನಿ ಭಾರತ ' ಎಂಬ ಪ್ರಸಿದ್ಧ ಕಾವ್ಯವನ್ನು ರಚಿಸಿದ್ದಾನೆ . ಈತನಿಗೆ ಉಪಮಾಲೋಲ , ಕರ್ಣಾಟ ಕವಿಚೂತವನಚೈತ್ರ ಎಂಬ ಬಿರುದುಗಳನ್ನು ನೀಡಿಗೌರವಿಸಲಾಗಿದೆ ,

## ಅ ] ಒಂದು ವಾಕ್ಯದಲ್ಲಿ ಉತ್ತರಿಸಿ

**1.** ಕುದುರೆಯನ್ನು ಅವನು ಯಾವುದರಿಂದ ಕಟ್ಟಿದನು **?**

ಕುದುರೆಯನ್ನು ಅವನು ತನ್ನ ಉತ್ತರೀಯದಿಂದ ಕಟ್ಟಿದನು .

**2.** ಮುನಿಸುತರು ಹೆದರಲು ಕಾರಣವೇನು **?**

ಅವನು ಯಜ್ಞಾಶ್ವವನ್ನು ಕಟ್ಟಿ ಹಾಕಿದ್ದರಿಂದ ಮುನಿಸುತರು ಹೆದರಿದರು .

**3. '** ಜೈಮಿನಿ ಭಾರತ **'** ಕಾವ್ಯವನ್ನು ಬರೆದ ಕವಿ ಯಾರು **?**

ಜೈಮಿನಿ ಭಾರತಕಾವ್ಯವನ್ನು ಬರೆದ ಕವಿ ಲಕ್ಷ್ಮೀಶ

**4.** ಯಜ್ಞಾಶ್ವವನ್ನು ಕಟ್ಟಿದವರು ಯಾರು **?**

ಯಜಾಶ್ವವನ್ನು ಕಟ್ಟಿದವರು ಲವ

KannadaPdf.com

## ಆ ] ಮೂರು - ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ .

**1. ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ ಏನೆಂದು ಬರೆಯಲಾಗಿತ್ತು ?**

ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ " ಭೂಮಂಡಲದಲ್ಲಿ ಕೌಸಲ್ಯೆಯು ಮಗನಾದ ರಾಮನು ಒಬ್ಬನೇ ವೀರನು ಇದು ಅವನ ಯಜ್ಞಕುದುರೆ ಇದನ್ನು ತಡೆಯುವ ಸಾಮರ್ಥ್ಯವುಳ್ಳವರು ಯಾರೇ ಆದರು ತಡೆಯಲಿ " ಎಂದ ಬರೆಯಲಾಗಿತ್ತು . , ಕುದುರೆಯನ್ನುಕಟ್ಟುವ ವಿಚಾರದಲ್ಲಿ ಮುನಿಸುತರಿಗೂ ಲವನಿಗೂ ನಡೆದ ಸಂವಾದವನ್ನು ಬರೆಯಿರಿ . ಲವನು ಆಶ್ರಮವನ್ನು ಹೊಕ್ಕ ಯಜ್ಞಾಶ್ವವನ್ನು ತನ್ನ ಉತ್ತರೀಯದಿಂದ ಬಾಳೆಯ ಗಿಡಕ್ಕೆ ಕಟ್ಟಿ ಹಾಕಿದ್ದನ್ನು ಕಂಡು ಹೆದರಿದ ಮುನಿಸುತರು " ಬೇಡಬೇಡ ಅರಸುಗಳ ಕುದುರೆಯನ್ನು ಬಿಡು , ನಮ್ಮನ್ನು ಹೊಡೆಯವರು " ಎಂದು ಹೇಳಿದರು . ಆಗ ಲವನು ನಗುತ " ಬ್ರಾಹ್ಮಣರ ಮಕ್ಕಳು ಹೆದರಿದರೆ , ಜಾನಕಿಯ ಮಗನು ಇದಕ್ಕೆ ಹೆದರುವನೇ , ನೀವು ಹೋಗಿ " ಎಂದು ಶೌರ್ಯದಿಂದ ಹೇಳಿದನು .

**2. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ವಿವರಿಸಿ .**

ಶ್ರೀರಾಮನು ಮಹರ್ಷಿಗಳ ಆದೇಶದಂತೆ ಅಶ್ವಮೇಧಯಾಗವನ್ನು ಕೈಗೊಂಡು , ಶತ್ರುಘ್ನನ ಬೆಂಗಾವಲಿನಲ್ಲಿ ಯಜ್ಞಾಶ್ವವನ್ನು ಕಳುಹಿಸಿದನು . ರಾಮನ ಆಜ್ಞೆಯಂತೆ ಹೊರಟ ಯಜ್ಞಾಶ್ವವನ್ನು ಭುಜಬಲ ಪರಾಕ್ರಮಿಗಳಾದ ರಾಜರುಗಳು ತಡೆಯಲು ಹೆದರಿ ನಮಸ್ಕರಿಸಿ ಮುಂದೆ ಹೋಗಲು ಬಿಟ್ಟರು . ಹೀಗೆ ಯಜ್ಞಾಶ್ವವು ಭೂಮಿಯಲ್ಲೆಲ್ಲ ಸಂಚರಿಸುತ್ತ ವಾಲ್ಮೀಕಿಯ ಆಶ್ರಮದ ತೋಟದ ಹಸುರಾದ ಹುಲ್ಲನ್ನು ತಿನ್ನಲು ಒಳಹೊಕ್ಕಿತು .

## ಇ ] ಎಂಟು - ಹತ್ತು ವಾಕ್ಯಗಳಲ್ಲಿ ಉತ್ತರಿಸಿ ,

**1. ಲವನ ನಡೆವಳಿಕೆ ಮೆಚ್ಚುಗೆಯಾಯಿತೇ ? ಏಕೆ ?**

ಲವನು ಬಾಲಕನಾಗಿದ್ದರು ಸ್ವಾಭಿಮಾನಿ , ಅವನ ಮಾತುಗಳು ವೀರೋಚಿತ , ಆತನ ಮಾತೃಪ್ರೇಮ ಅನನ್ಯ , ವಾಲ್ಮೀಕಿ ಮಹರ್ಷಿಗಳು ಆಶ್ರಮದಿಂದ ಹೊರಗೆ ಹೋಗುವಾಗ ಅವನಿಗೆ ಆಶ್ರಮದ ಜವಾಬ್ದಾರಿಯನ್ನು ವಹಿಸಿರುತ್ತಾರೆ . ಇಂತಹ ಸಮಯದಲ್ಲಿ ರಾಮನ ಯಜ್ಞಾಶ್ವವ ಆಶ್ರಮವನ್ನು ಪ್ರವೇಶಿಸಿ ಹೂದೋಟವನ್ನು ಹಾಳುಮಾಡುತ್ತದೆ . ಇದನ್ನುಕಂಡು ಅವನು ಕುದುರೆಯ ಬಳಿಬಂದು , ಕುದುರೆಯ ನೆತ್ತಿಯ ಮೇಲೆ ಮೆರೆಯುತ್ತಿದ್ದ ಪಟ್ಟದ ಲಿಖಿತವನ್ನು ಓದಿ , ರಾಮನೊಬ್ಬನೇ ಜಗತ್ತಿಗೆ ವೀರನೆಂಬ ವಾಕ್ಯವನ್ನು ಕಂಡು ಕೆರಳಿ , ಇವನ ಗರ್ವವನ್ನು ಬಿಡಿಸುತ್ತೇನೆ , ಇಲ್ಲದಿದ್ದಲ್ಲಿ ನನ್ನತಾಯಿಯನ್ನು ಎಲ್ಲರೂ ಹೇಡಿಯನ್ನು ಹೆತ್ತವಳೆಂದು ದೂರಿಬಿಡುತ್ತಾರೆ ಎಂದು ಚಿಂತಿಸಿ , ತನ್ನ ತೋಳಲವನ್ನು ತೋರಿಸಿಬಿಡುತ್ತೇನೆ ಎಂದು ಕುದುರೆಯನ್ನು ಕಟ್ಟಿಹಾಕುತ್ತಾನೆ . ಋಷಿ ಮುನಿಗಳ ಮಕ್ಕಳು ಹೆದರಿಕೆಯಿಂದ ಬೇಡವೆಂದಾಗ , " ಬ್ರಾಹ್ಮಣರ ಮಕ್ಕಳು ಯುದ್ಧಕ್ಕೆ ಹೆದರಿದರೆ : ಜಾನಕಿಯ ಸುತನು ಹೆದರುವನೇ ? " ಎಂದು ವೀರನಂತೆ ಬಿಲ್ಲಿನ ಹೆದೆಯೇರಿಸಿ ಠೇಂಕಾರವನ್ನು ಮಾಡಿ ನಿಂತನು . ಇಂತಹ ವೀರ ಬಾಲಕನ ಶೌರ್ಯ , ತಾಯಿಯ ಮೇಲಿನ ಮಮತೆ , ದುರಹಂಕಾರವನ್ನು ಮೆಟ್ಟುವ ಸಾಹಸ . ಎಂತಹವರಿಗೂ ಮೆಚ್ಚುಗೆಯಾಗುತ್ತದೆ .

**2. ಲವನು ಯಜ್ಞಾಶ್ವವನ್ನು ಕಟ್ಟಲು ಕಾರಣವೇನು ?**

" ಅಂದು ಶ್ರೀರಾಮನು ಮಹರ್ಷಿಗಳ ಆದೇಶದಂತೆ ಅಶ್ವಮೇಧಯಾಗವನ್ನು ಕೈಗೊಂಡು , ಶತ್ರುಘ್ನನ ಬೆಂಗಾವಲಿನಲ್ಲಿ ಯಜ್ಞಾಶ್ವವನ್ನು ಕಳುಹಿಸಿದನು . ರಾಮನ ಆಜ್ಞೆಯಂತೆ ಹೊರಟ ಯಜಾಶ್ವವನ್ನು ಭುಜಬಲ ಪರಾಕ್ರಮಿಗಳಾದ ರಾಜರುಗಳು ತಡೆಯಲು ಹೆದರಿ ನಮಸ್ಕರಿಸಿ ಮುಂದೆ ಹೋಗಲು ಬಿಟ್ಟರು . ಹೀಗೆ ಯಜಾರವು ಭೂಮಿಯಲ್ಲೆಲ್ಲ ಸಂಚರಿಸುತ್ತ ವಾಲ್ಮೀಕಿಯ ಆಶ್ರಮದ ತೋಟದ ಹಸುರಾದ ಹುಲ್ಲನ್ನು ತಿನ್ನಲು ಒಳಹೊಕ್ಕಿತು . ಆಗ ಇದನ್ನು ಕಂಡ ಅವನು ಯಾವ ಕಡೆಯ ಕುದುರೆಯು , ಹೊಕ್ಕು , ಹೂತೋಟವನ್ನು ನುಗ್ಗುನುರಿಯಾಗುವಂತೆ ತುಳಿದುದು . " ಎಂದು ಕುದುರೆ ಯಕಡೆಗೆ ನಡೆದು ಬಂದು ನೋಡಿದನು .

KannadaPdf.com

ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯಲ್ಲಿ " ಭೂಮಂಡಲದಲ್ಲಿ ಕೌಸಲ್ಯಯ ಮಗನಾದ ಉಮನು ಒಬ್ಬನೇ ವೀರನು ಅವನ ಯಜ್ಞಕುದುರೆ ಇದನ್ನು ತಡೆಯುವ ಸಾಮರ್ಥ್ಯವುಳ್ಳವರು ಯಾರೇ ಆದರು ತಡೆಯಲಿ " ಎಂದು ಬರೆಯಲಾಗಿತ್ತು . ಇದನ್ನು ಓದಿದ ಅವನು ಕೋಪಗೊಂಡು ಆಹಂಕಾರವನ್ನು ಬಿಡಿಸದಿದ್ದರೆ ತನ್ನ ತಾಯಿಯನ್ನು ಎಲ್ಲ ಜನರೂ ಬಂಜೆ ಎನ್ನದಿರುವರೇ , ತನಗೆ ರುವ ತೋಳುಗಳು ಇವು ಏತಕೆ ? " ಎಂದು ಪ್ರತಿಜ್ಞೆಯನ್ನು ಕೈಗೊಂಡು , ಯಜ್ಞಾಶ್ವವನ್ನು ತನ್ನ ಉತ್ತರೀಯದಿಂದ ಕಟ್ಟಿಹಾಕಿದನು .

## ಈ ] ಸಂದರ್ಭ ಸಹಿತ ಸ್ವಾರಸ್ಯ ತಿಳಿಸಿ .

### 1. " ಅರಸುಗಳ ವಾಜಿಯಂ ಬಿಡು "

' ವೀರಲವ ' ಎಂಬ ಸಂದರ್ಭ ವಾಕ್ಯವನ್ನು ಕವಿ ಲಕ್ಷ್ಮೀಶನು ರಚಿಸಿರುವ ' ಜೈಮಿನಿ ಭಾರತ ' ಮಹಾಕಾವ್ಯದಿಂದ ಆಯ್ದ ' ವೀರಲವ ' ಎಂಬ ಸಂದರ್ಭ : - ವೀರಲವನು ತನ್ನ ಉತ್ತರೀಯದಿಂದ ಯಜ್ಞಾಶ್ವವನ್ನು ಬಾಳೆಯಗಿಡಕ್ಕೆ ಕಟ್ಟಿಹಾಕಿದ ಸಂದರ್ಭದಲ್ಲಿ ಮುನಿಪುತ್ರರು ಈ ಮಾತನ್ನು ಹೇಳುತ್ತಾರೆ . ರಾಜನ ಯಜ್ಞಾಶ್ವವನ್ನು ಕಟ್ಟಿಹಾಕುವುದು ಅಪರಾಧ ಅದರಿಂದ ಮುಂದೆ ತೊಂದರೆ ಉಂಟಾಗುತ್ತದೆ ಎಂದು ಮುನಿಪುತ್ತರು ಭಯಗೊಳ್ಳುವುದನ್ನು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವರ್ಣಿಸಲಾಗಿದೆ .

### 2. " ಜಾನಕಿಯ ಮಗನಿದಕೆ ಬೆದರುವನೆ "

ಸಂದರ್ಭ : ವೀರಲವನು ತನ್ನ ಉತ್ತರೀಯದಿಂದ ಯಜ್ಞಾಶ್ವವನ್ನು ಬಾಳೆಯಗಿಡಕ್ಕೆ ಕಟ್ಟಿ ಹಾಕಿದ್ದನ್ನು ಕಂಡು ಮುನಿಪುತ್ರರು ಕುದುರೆಯನ್ನು ಬಿಡು ಎಂದು ಹೇಳಿದ ಸಂದರ್ಭದಲ್ಲಿ ಈ ಮಾತನ್ನು ಅವನು ಹೇಳುತ್ತಾನೆ .

ಸ್ವಾರಸ್ಯ : : - ಸೀತೆಯ ಮಗನಾದ ಲವನ ಧೈರ್ಯವು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ .

### 3. " ರಧ್ವಹನ ಸೊಲ್ಗಳಿ ನಮಿಸಲ್ "

ಆಯ್ಕೆ : ಈ ಪದ್ಯಭಾಗದಿಂದ ಆರಿಸಲಾಗಿದೆ . ಸಂದರ್ಭ : - ಶ್ರೀರಾಮನ ಅಶ್ವಮೇಧ ಯಾಗದ ಯಜ್ಞಾಶ್ವವು ಸಂಚರಿಸಿದ ಕಡೆಯಲ್ಲೆಲ್ಲ ರಾಜರುಗಳಿಂದ ಅದಕ್ಕೆ ದೊರೆತ ಭವ್ಯ ಸ್ವಾಗತ ಹಾಗೂ ನೀಡಿದ ಗೌರವವನ್ನು ಕುರಿತು ವರ್ಣಿಸುವ ಸಂದರ್ಭದಲ್ಲಿ ಕವಿಯು ಈ ಮಾತನ್ನು ಹೇಳುತ್ತಾನೆ . ಶ್ರೀರಾಮನ ಹೆಸರನ್ನು ಕೇಳಿಯೇ ಪರಾಕ್ರಮಿಗಳಾದ ರಾಜರುಗಳು ಗೌರವದಿಂದ ನಮಿಸಿ ಶರಣಾಗಿ ಯಜ್ಞಾಶ್ವವು ಮುಂದೆ ಸಂಚರಿಸಲು ಅನುವು ಮಾಡಿಕೊಟ್ಟರು ಎಂದು ವರ್ಣಿಸಿರುವುದು ಸ್ವಾರಸ್ಯಪೂರ್ಣವಾಗಿದೆ .

### 4. "ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ಪುದೆ "

ಸಂದರ್ಭ : - ಲವನು ತನ್ನ ಆಶ್ರಮದ ತೋಟವನ್ನು ಧ್ವಂಸ ಮಾಡಿದ ಶ್ರೀರಾಮನ ಯಜ್ಞಾಶ್ವದ ಹಣೆಯಲ್ಲಿದ್ದ ಪಟ್ಟಿಯ ಬರಹವನ್ನು ಓದಿ ಅದನ್ನು ಕಟ್ಟಿಹಾಕಲು ನಿರ್ಧರಿಸಿದ ಸಂದರ್ಭದಲ್ಲಿ ಈ ಮಾತನ್ನು ಹೇಳುತ್ತಾನೆ .

ಸ್ವಾರಸ್ಯ : - ಕ್ಷತ್ರಿಯನಾದ ವೀರಲವನು ಬಾಲಕನಾದರೂ ಹೆದರದೆ ಕುದುರೆಯನ್ನು ಕಟ್ಟಲು ನಿರ್ಧರಿಸಿ , ತನ್ನ ವೀರತ್ವವನ್ನು ಪ್ರದರ್ಶಿಸುವುದು ಈ ಮಾತಿನಲ್ಲಿ ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಗೊಂಡಿದೆ .

## ಭಾಷಾ ಚಟುವಟಿಕೆ

### ೧. ವಿಗ್ರಹಿಸಿ ಸಮಾಸವನ್ನು ಹೆಸರಿಸಿ ,

೧. ಸೊಲ್ಗಳಿ -ಸೊಲ್ಲನ್ನು + ಕೇಳಿ=ಕಿಯಾಸಮಾಸ

| | |
|---|---|
| Download: Kannadapdf.com | https://kannadapdf.com/ |

೨. ನಲ್ಲುದುರೆ -ನಲ್ಲಿತು + ಕುದುರೆ=ಕರ್ಮಧಾರಯ ಸಮಾಸ

೩. ಬಿಲ್ಗೊಂಡು -ಬಿಲ್ಲನ್ನು + ಕೊಂಡು=ಕ್ರಿಯಾಸಮಾಸ

೪. ಬಿಲ್ಲಿರುವನೇರಿಸಿ -ಬಿಲ್ಲಿನತಿರುವನ್ನು + ಏರಿಸಿ = ಕ್ರಿಯಾಸಮಾಸ

೫. ಪೂದೋಟ -ಪೂವಿನ + ತೋಟ= ತತ್ಪುರುಷಸಮಾಸ

೬. ಲಿಖಿತವನೋದಿ – ಲಿಖಿತವನ್ನು + ಓದ=ಕ್ರಿಯಾಸಮಾಸ

೭. ಯಜತುರುಗ -ಯಜ್ಞದ + ತುರುಗ=ತತ್ಪುರುಷಸಮಾಸ

೮. ಕದಳೆದುಮ – ಕದಳಿಯ + ದುಮ = ತತ್ಪುರುಷಸಮಾಸ

೯. ಅಭಿಪ -ಅಬ್ಧಿಗೆ ( ಸಮುದ್ರಕ್ಕೆ ) ಪತಿ ( ಒಡೆಯ ) ಯಾರೋ ಆತ ( ವರುಣ ) = ಬಹುವ್ರೀಹಿಸಮಾಸ

## ೨. ತತ್ಸಮ – ತದ್ಭವ ಬರೆಯಿರಿ.

೧. ವೀರ – ಬೀರ ೨ , ಯಜ್ಞ – ಜನ್ನ , ೩,ಬಂಜೆ – ವಂದ್ಯಾ ೪ , ಕುವರ – ಕುಮಾರ ೫. ಲೋಕ – ಲೋಗ

## ವಿಂಗಡಿಸಿ ಸಂಧಿಯ ಹೆಸರು ಬರೆಯಿರಿ.

೧. ಚರಿಸುತದ್ವರದ -ಚರಿಸುತ + ಅದ್ವರದ = ಲೋಪಸಂಧಿ

೨. ನಿಜಾಶ್ರಮ – ನಿಜ + ಆಶ್ರಮ = ಸವರ್ಣದೀರ್ಘಸಂಧಿ

೩. ಲೇಖನವನೋದಿ – ಲೇಖನವನು + ಓದಿ = ಲೋಪಸಂಧಿ

೪. ತೆಗೆದುತ್ತರೀಯಮಂ -ತೆಗೆದು + ಉತ್ತರೀಯಮಂ = ಲೋಪಸಂಧಿ

೫. ಬೇಡಬೇಡರಸುಗಳ – ಬೇಡಬೇಡ + ಅರಸುಗಳ = ಲೋಪಸಂಧಿ

೬ ನಿಂತಿರ್ದನ್ – ನಿಂತು + ಇರ್ದನ್ = ಲೋಪಸಂಧಿ

೭ ಪೂದೋಟ -ಪೂ – ತೋಟ = ಆದೇಶಸಂಧಿ

೮. ಸೊಳ್ಳೇಳಿ – ಸೊಲ್ಲು + ಕೇಳಿ =ಆದೇಶಸಂಧಿ .

| | |
|---|---|
| Download: Kannadapdf.com | https://kannadapdf.com/ |

**೪. ಪ್ರಸ್ತಾರಹಾಕಿ ಗಣ ವಿಭಾಗ ಮಾಡಿ ಛಂದಸ್ಸನ್ನು ಹೆಸರಿಸಿ ಲಕ್ಷಣ ಬರೆಯಿರಿ.**

೫ ೫ ೫ ೫

– U – | – – U | U U U U U | – – U

ಉರ್ವಿಯೊಳ್ । ಕೌಸಲ್ಯೆ । ಪಡೆದಕುವ । ರಂರಾಮು।

– U – | – U – | U U – U | U U U U U

ನೊರ್ವನೇ । ವೀರನಾ । ತನಯಜ್ಞ । ತುರಗಮಿದು।

– U U U | – U – | – U – | U U U – | – U – | U U U – –

ನಿರ್ವಹಿಸ । ಲಾರ್ಪರಾ । ರಾದೊಡಂ । ತಡೆಯಲೆಂ । ದಿರ್ದಲೇ । ಖಿನವನೋ ।ದಿ

**ಛಂದಸ್ಸು : ವಾರ್ಧಕ ಷಟ್ಪದಿ**

ವರ್ಧಕ ಷಟ್ಪದಿ ಲಕ್ಷಣಗಳು :

* ಆರು ಸಾಲುಗಳಿರುತ್ತವೆ

*೧ ,೨ ೪ ಮತ್ತು ೫ ನೇ ಸಾಲುಗಳು ತಲಾ ೨೦ ಮಾತ್ರೆಗಳನ್ನು ಹೊಂದಿದ್ದು ೫ ಮಾತ್ರೆಯ ೪ ಗಣಗಳಿರುತ್ತವೆ

* ೩ ಮತ್ತು ೪ನೇ ಸಾಲುಗಳು ತಲಾ ೩೨ ಮಾತ್ರಗಳನ್ನು ಹೊಂದಿದ್ದು ೫ ಮಾತ್ರೆಯ ೬ ಗಣಗಳೊಂದಿಗೆ ಒಂದು ಗುರು ಇರುತ್ತದೆ .

* ಮೊದಲನೇ ಸಾಲಿನನ ಗಣವಿನ್ಯಾಸ

**'ವೀರಲವ' ಪದ್ಯಭಾಗದಲ್ಲಿ ಬರುವ ವ್ಯಾಕರಣಾಂಶಗಳು**

**ಹೊಸಪದಗಳ ಅರ್ಥ :**

೧. ನೃಪ – ದೊರೆ, ೨. ಚರಿಸು – ಸಂಚರಿಸು, ೩. ತುರಂಗ – ವಾಜಿ, ಹಯ, ಕುದುರೆ, ೪. ಆರ್ಪರ್ – ಸಮರ್ಥರು.
೫. ಅಬ್ಧಿಪ – ವರುಣ, ೬. ಉರ್ವಿ – ಭೂಮಿ ೭. ವಾಸಿ – ಪ್ರತಿಜ್ಞೆ, ೮. ಗಳ – ಕೊರಳು ೯. ಕದಳೀದ್ರುಮ – ಬಾಳೆಗಿಡ,
೧೦. ಅಗಡು – ಶೌರ್ಯ, ೧೧. ಪಾರ್ವರು – ಬ್ರಾಹ್ಮಣರು. ೧೨. ಲಿಖಿತ – ಬರಹ ( ಬರವಣಿಗೆ)

## ಬಹು ಆಯ್ಕೆ ಪ್ರಶ್ನೆಗಳು

೧. ' ರಗಳೆ ' ಪದದ ತದ್ಭವ ರೂಪವಿದೆ .

ಎ ) ರಘಟಾ ಬಿ )ರಗಳಾ ಸಿ)ರಾಗಟ ಸಿ)ರಂಗಗೀತೆ

೨. ಇವುಗಳಲ್ಲಿ ಬಹುಪಾದಗಳುಳ್ಳ ಪದ್ಯ :

ಎ ) ಕಂದ ಬಿ ) ಷಟ್ಪದಿ ಸಿ ) ವೃತ್ತ ಡಿ ) ರಗಳೆ

೩. ವಾರ್ಧಕ ಷಟ್ಪದಿಯ ಒಂದು ಪದ್ಯದಲ್ಲಿರುವ ಒಟ್ಟು ಮಾತ್ರೆಗಳ ಸಂಖ್ಯೆ :

ಎ ) ೧೦೨ ಬಿ ) ೧೪೦ ಸಿ ) ೧೪೪ ಡಿ ) ೬೪

೪. ಇವುಗಳಲ್ಲಿ ಯಾವುದು ರಗಳೆಯ ವಿಧವಾಗಿಲ್ಲ :

ಎ ) ಉತ್ಸಾಹ ಬಿ ) ಲಲಿತ ಸಿ ) ಸರಸಿ ಡಿ ) ಮಂದಾನಿಲ

೫ . ವಾರ್ಧಕ ಷಟ್ಪದಿಯಲ್ಲಿ ಪ್ರತಿ ಗಣವು ಎಷ್ಟು ಮಾತ್ರೆಗಳಿಂದ ಕೂಡಿರುತ್ತದೆ ?

ಎ) ೩ ಬಿ) ೬ ಸಿ)೪ ಡಿ ) ೫

೬. * ನೆತ್ತಿಯೊಳ್ " ಇದು ಈ ವಿಭಕ್ತಿಗೆ ಉದಾಹರಣೆಯಾಗಿದೆ .

ಎ ) ಪ್ರಥಮ ಬಿ ) ದ್ವಿತೀಯ ಸಿ ) ತೃತೀಯ ಡಿ ) ಸಪ್ತಮಿ

೭.' ಲಿಖಿತಮಂ ' ಇಲ್ಲಿರುವ ವಿಭಕ್ತಿ :

ಎ ) ಪ್ರಥಮ ಬಿ ) ದ್ವಿತೀಯ ಸಿ ) ತೃತೀಯ ಡಿ ) ಸಪ್ತಮಿ

೮. ' ಕುವರಂ ' ಇಲ್ಲಿರುವ ಅಕ್ಷರಗಣ :

ಎ ) ಭ – ಗಣ ಬಿ ) ಸ-ಗಣ ಸಿ ) ಮ – ಗಣ ಡಿ)ತ -ಗಣ

೯). ಉರ್ವಿಯೊಳ್ ? ಈ ಪದದಲ್ಲಿರುವ ಕಾರಕಾರ್ಥ .

ಎ)ಕರ್ಮಾರ್ಥ ಬಿ)ಸಂಪ್ರದಾನ ಸಿ) ಅಪಾದಾನ ಸಿ) ಅಧಿಕರಣ

೧೦. ' ಅಗಡು ' ಪದದ ಹೊಸಗನ್ನಡ ರೂಪವಾಗಿದೆ .

ಎ )ಅಡಗಿಕೋ ಬಿ)ಶೌರ್ಯ ಸಿ)ಕುದುರೆ ಡಿ)ಹಡಗು

ಉತ್ತರ : ಎ ) ರಘಟಾ ಬಿ ) ರಗಳೆ ಸಿ ) ೧೪ಳ ಸಿ ) ಸರಸಿ ಸಿ ) ೫ ಡಿ ) ಸಪ್ತಮಿ ಬಿ ) ದ್ವಿತೀಯ ಬಿ ) ಸ – ಗಣ ಡಿ ) ಅಧಿಕರಣ ಬಿ) . ಶೌರ್ಯ

## ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸಂಬಂಧಿಸಿದಂತೆ ಪದ ಬರೆಯಿರಿ

೧. ಭಾಮಿನಿ: ೦೦೨ : :ವರ್ಧಕ:_____

೨. ವೃತ್ತಗಳು : ಅಕ್ಷರಗಣ :ರಗಳೆ :______

೩. ಸೊಲ್ಲೇಳಿ :ಕ್ರಿಯಾಸಮಾಸ :ಪೂದೋಟ_____

೪. ಬಿಲ್ಲಿರುವನೇರಿಸಿ:ಕ್ರಿಯಾಸಮಾಸ : ನಲ್ಲುದುರೆ_______

೫. ನೃಪ:ರಾಜ :ಅಭಿಪ :________

೬. ಸೊಳ್ಳೇಳಿ :ಸೊಲ್ಲನ್ನು + ಕೇಳಿ :________

೭. ವೀರ ; ಬೀರ :: ಬಂಜೆ :__________

kannadaPdf.com

೮. ಗಳ :ಕೊರಳು:: ವಾಜಿ :_______

ಉತ್ತರಗಳು : ೧ . ೧ಳಳ ೨ .ಮಾತ್ರಾಗಣ ೩.ತತ್ಪುರುಷಸಮಾಸ ೪.ಕರ್ಮಧಾರಯ

೫. ವರುಣ ೬.ನಲ್ಲಿ ತ್ತು +ಕುದುರೆ ೭.ವಂದ್ಯಾ ೮.ಕುದುರೆ

KannadaPdf.com